ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 497

ಸದಸ್ಯರ ಹೆಸರು : ಶ್ರೀ ಕೆ.ಟಿ. ಶ್ರೀಕಂಠೇಗೌಡ

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 05.02.2021

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಎಷ್ಟು ಸರ್ಕಾರಿ ಬಸ್ ನಿಲ್ದಾಣಗಳಿವೆ;</td><td>ರಾಜ್ಯದಲ್ಲಿನ ನಾಲ್ಕೂ ಸಾರಿಗೆ ಸಂಸ್ಥೆಗಳ ವ್ಯಾಪ್ತಿಯಲ್ಲಿ ಒಟ್ಟು 551 ಬಸ್ ನಿಲ್ದಾಣಗಳಿದ್ದು, ಸಂಸ್ಥೆವಾರು ಮಾಹಿತಿ ಈ ಕೆಳಕಂಡಂತಿದೆ:
<table><tr><th>ಸಂಸ್ಥೆಗಳು</th><th>ಬಸ್ ನಿಲ್ದಾಣಗಳು</th></tr><tr><td>ಕ.ರಾ.ರ.ಸಾ.ನಿಗಮ</td><td>165</td></tr><tr><td>ಬೆಂ.ಮ.ಸಾ.ಸಂಸ್ಥೆ</td><td>56</td></tr><tr><td>ವಾ.ಕ.ರ.ಸಾ.ಸಂಸ್ಥೆ</td><td>176</td></tr><tr><td>ಈ.ಕ.ರ.ಸಾ.ಸಂಸ್ಥೆ</td><td>154</td></tr><tr><td>ಒಟ್ಟು:</td><td>551</td></tr></table></td></tr>
<tr><td>ಆ)</td><td>ಈ ಬಸ್ ನಿಲ್ದಾಣಗಳಲ್ಲಿ ಮಹಿಳೆಯರ ವಿಶ್ರಾಂತಿ ಗೃಹಗಳನ್ನು ನಿರ್ಮಿಸಲಾಗಿದೆಯೇ;</td><td>ರಾಜ್ಯದಲ್ಲಿನ ನಾಲ್ಕೂ ಸಾರಿಗೆ ಸಂಸ್ಥೆಗಳ ವ್ಯಾಪ್ತಿಯಲ್ಲಿರುವ ಒಟ್ಟು 551 ಬಸ್ ನಿಲ್ದಾಣಗಳ ಪೈಕಿ, 390 ಬಸ್ ನಿಲ್ದಾಣಗಳಲ್ಲಿ ಮಹಿಳೆಯರ ವಿಶ್ರಾಂತಿ ಗೃಹಗಳನ್ನು ನಿರ್ಮಿಸಲಾಗಿದ್ದು, ಸಂಸ್ಥೆವಾರು ಮಾಹಿತಿ ಈ ಕೆಳಕಂಡಂತಿದೆ:
<table><tr><th>ಸಂಸ್ಥೆಗಳು</th><th>ಮಹಿಳೆಯರ ವಿಶ್ರಾಂತಿ ಗೃಹಗಳು</th></tr><tr><td>ಕ.ರಾ.ರ.ಸಾ.ನಿಗಮ</td><td>99</td></tr><tr><td>ಬೆಂ.ಮ.ಸಾ.ಸಂಸ್ಥೆ</td><td>14</td></tr><tr><td>ವಾ.ಕ.ರ.ಸಾ.ಸಂಸ್ಥೆ</td><td>154</td></tr><tr><td>ಈ.ಕ.ರ.ಸಾ.ಸಂಸ್ಥೆ</td><td>123</td></tr><tr><td>ಒಟ್ಟು:</td><td>390</td></tr></table></td></tr>
<tr><td>ಇ)</td><td>ಇಲ್ಲವಾದಲ್ಲಿ, ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;</td><td>ಬಸ್ ನಿಲ್ದಾಣಗಳಲ್ಲಿ ಮಹಿಳೆಯರ ವಿಶ್ರಾಂತಿ ಗೃಹಗಳನ್ನು ನಿರ್ಮಿಸಲು –

ಕ.ರಾ.ರ.ಸಾ.ನಿಗಮ:

66 ಬಸ್ ನಿಲ್ದಾಣಗಳಲ್ಲಿ ಮಹಿಳೆಯರ ವಿಶ್ರಾಂತಿ ಗೃಹಗಳ ಕೊರತೆಯಿದ್ದು, ಪ್ರಸ್ತುತ ಕೋವಿಡ್-19 ಸಾಂಕ್ರಾಮಿಕ ರೋಗದ ಪಿಡುಗಿನಿಂದಾಗಿ ನಿಗಮವು ತೀವ್ರ ಆರ್ಥಿಕ ಸಂಕಷ್ಟದಲ್ಲಿರುವುದರಿಂದ, ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಕಷ್ಟಕರವಾಗಿದ್ದು, ಹಂತಹಂತವಾಗಿ ನಿಗಮದ ಆರ್ಥಿಕ ಪರಿಸ್ಥಿತಿಯನ್ನು ಆಧರಿಸಿ ನಿರ್ಮಿಸಲು ಕ್ರಮ ಜರುಗಿಸಲಾಗುವುದು.</td></tr>
</table>

...2

		ಬೆಂ.ಮ.ಸಾ.ಸಂಸ್ಥೆ: ಒಟ್ಟು 16 ಬಸ್ ನಿಲ್ದಾಣಗಳಲ್ಲಿ ಮಹಿಳಾ ವಿಶ್ರಾಂತಿ ಗೃಹಗಳನ್ನು ನಿರ್ಮಿಸಲು ಯೋಜಿಸಲಾಗಿದೆ. ಸಂಸ್ಥೆಯ ಆರ್ಥಿಕ ಪರಸ್ಥಿತಿಗೆ ಅನುಗುಣವಾಗಿ ಹಾಗೂ ಬಸ್ ನಿಲ್ದಾಣಗಳಲ್ಲಿ ಅವಶ್ಯಕತೆಯ ಮೇರೆಗೆ ವಿಶ್ರಾಂತಿ ಗೃಹಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು. ವಾ.ಕ.ರ.ಸಾ.ಸಂಸ್ಥೆ: 22 ಬಸ್ ನಿಲ್ದಾಣಗಳು ಚಿಕ್ಕ ಬಸ್ ನಿಲ್ದಾಣಗಳಿದ್ದು ಹಾಗೂ ಗ್ರಾಮ ಮಟ್ಟದ್ದಾಗಿದ್ದು, ಅವಶ್ಯಕತೆಗನುಗುಣವಾಗಿ ಹೊಸದಾಗಿ ಬಸ್ ನಿಲ್ದಾಣ ನಿರ್ಮಿಸುವ ಸಮಯದಲ್ಲಿ ಮಹಿಳಾ ವಿಶ್ರಾಂತಿ ಗೃಹಗಳಿಗೆ ಅವಕಾಶ ಕಲ್ಪಿಸಲಾಗುವುದು. ಈ.ಕ.ರ.ಸಾ.ಸಂಸ್ಥೆ: 31 ಬಸ್ ನಿಲ್ದಾಣಗಳು ಚಿಕ್ಕ ಮಿನಿ ಬಸ್ ನಿಲ್ದಾಣಗಳಾಗಿರುವುದರಿಂದ, ಪ್ರತ್ಯೇಕ ಮಹಿಳೆಯರ ವಿಶ್ರಾಂತಿ ಗೃಹಗಳಿರುವುದಿಲ್ಲ. ಬಸ್ ನಿಲ್ದಾಣಗಳಲ್ಲಿ ಅವಶ್ಯಕತೆಯ ಮೇರೆಗೆ ಹಾಗೂ ಆರ್ಥಿಕ ಪರಿಸ್ಥಿತಿಯನ್ನು ಆಧರಿಸಿ, ವಿಶ್ರಾಂತಿ ಗೃಹಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು.
ಈ)	ಬಸ್ ನಿಲ್ದಾಣಗಳಲ್ಲಿನ ಶೌಚಾಲಯಗಳು ಸಮರ್ಪಕ ನಿರ್ವಹಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು?	ಸಾರಿಗೆ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಎಲ್ಲಾ ಬಸ್ ನಿಲ್ದಾಣಗಳಲ್ಲಿನ ಮೂತ್ರಾಲಯ ಮತ್ತು ಶೌಚಾಲಯಗಳ ಸ್ವಚ್ಛತೆಯ ಸಮರ್ಪಕ ನಿರ್ವಹಣೆಯ ಕಾರ್ಯಕ್ಕಾಗಿ ವಿಭಾಗಗಳ ಮಟ್ಟದಲ್ಲಿ ನೊಂದಾಯಿತ ಸ್ವಚ್ಛತಾ ಗುತ್ತಿಗೆದಾರರನ್ನು ಕೆ.ಟಿ.ಟಿ.ಪಿ ಕಾಯ್ದೆಯನ್ವಯ ಟೆಂಡರ್ ಮೂಲಕ ನೇಮಕ ಮಾಡಲಾಗುತ್ತಿದೆ. ಕರಾರಿನ ನಿಯಮಾವಳಿಯನ್ವಯ ಸಮರ್ಪಕವಾಗಿ ಸ್ವಚ್ಛತಾ ನಿರ್ವಹಣೆಯನ್ನು ನಿರ್ವಹಿಸಲಾಗುತ್ತಿದೆ

ಸಂಖ್ಯೆ: ಟಿಡಿ 43 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯ ಮಂತ್ರಿಗಳು ಹಾಗೂ
ಸಾರಿಗೆ ಸಚಿವರು